# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2016-17ನೇ ಸಾಲಿನ ರೇಷ್ಮೆ ಇಲಾಖೆಯ ಮುಂದುವರೆದ ಯೋಜನೆ – ಮಾರ್ಪಾಡಿಲ್ಲದ ಯೋಜನಾ ಕಾರ್ಯಕ್ರಮಗಳಿಗೆ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:

1. ರೇಷ್ಮೆ ಆಯುಕ್ತರ ಪತ್ರ ಸಂಖ್ಯೆ: ಯೋ/ಪಿಎಸ್-1/ವಾ.ಯೋ/2/2016-17, ದಿನಾಂಕ: 12/13-04-2016.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ: 30-04-2016 ರಂದು ನಡೆದ ಸಭೆಯ ನಡವಳಿ.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ದಿನಾಂಕ: 12/13-04-2016 ರ ಪತ್ರದಲ್ಲಿ ರೇಷ್ಮೆ ಇಲಾಖೆಯ ಯೋಜನಾ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ 2016-17ನೇ ಸಾಲಿನ ಆಯವ್ಯಯದಲ್ಲಿ ರೂ.25334.00 ಲಕ್ಷಗಳ ಅನುದಾನವನ್ನು ವಿವಿಧ 08 ಲೆಕ್ಕಶೀರ್ಷಿಕೆಗಳಡಿ ಒದಗಿಸಲಾಗಿದೆ. 2016-17ನೇ ಸಾಲಿನ ಮುಂದುವರೆದ ಯೋಜನೆ – ಮಾರ್ಪಾಡಿಲ್ಲದ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಯೋಜನೆವಾರು, ಕಾರ್ಯಕ್ರಮವಾರು ವಿವರಗಳನ್ನು ತಯಾರಿಸಿ, ಸಲ್ಲಿಸುತ್ತಾ ಸದರಿ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ರೇಷ್ಮೆ ಕೃಷಿ ಅಭಿವೃದ್ಧಿ ಆಯುಕ್ತರು ಹಾಗೂ ರೇಷ್ಮೆ ನಿರ್ದೇಶಕರು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ದಿನಾಂಕ: 30-04-2016 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ ಇವರ ಅಧ್ಯಕ್ಷತೆಯಲ್ಲಿ 2016-17ನೇ ಸಾಲಿನ ಮುಂದುವರೆದ ಯೋಜನೆಗಳ ಮತ್ತು ಇನ್ನಿತರ ವಿಷಯಗಳ ಬಗ್ಗೆ ಸಭೆ ಜರುಗಿದ್ದು, ಸದರಿ ಸಭೆಯಲ್ಲಿ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆ ಕಾರ್ಯಕ್ರಮಗಳನ್ನು ಹೊರತು ಪಡಿಸಿ, ಮುಂದುವರೆದ – ಮಾರ್ಪಾಡಿಲ್ಲದ 06 ಯೋಜನಾ ಕಾರ್ಯಕ್ರಮಗಳನ್ನು 2016-17ನೇ ಸಾಲಿನಲ್ಲಿ ಮುಂದುವರೆಸಲು ನಿರ್ಣಯ ತೆಗೆದುಕೊಳ್ಳಲಾಗಿದೆ. ಆದ್ದರಿಂದ ಸದರಿ 06 ಯೋಜನೆಗಳನ್ನು 2016-17ನೇ ಸಾಲಿನಲ್ಲಿ ಮುಂದುವರೆಸಿ, ಆಡಳಿತಾತ್ಮಕ ಮಂಜೂರಾತಿ ನೀಡಲು ಸರ್ಕಾರವು ನಿರ್ಧರಿಸಿರುವ ಕಾರಣ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ತೋಇ 75 ರೇಕೃವಿ 2016,**
**ಬೆಂಗಳೂರು, ದಿನಾಂಕ: 10-05-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ರೇಷ್ಮೆ ಇಲಾಖೆಯ ವಾರ್ಷಿಕ ಯೋಜನೆಯಡಿ ಚಾಲ್ತಿಯಲ್ಲಿರುವ ರಾಜ್ಯ ಯೋಜನಾ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ 2016-17ನೇ ಸಾಲಿನ ಆಯವ್ಯಯದಲ್ಲಿ ಒಟ್ಟು ರೂ. 25334.00 ಲಕ್ಷಗಳನ್ನು ಒದಗಿಸಲಾಗಿದ್ದು, ಈ ಕೆಳಕಂಡ ಮುಂದುವರೆದ 06 ಮಾರ್ಪಾಡಿಲ್ಲದ ವಿವಿದ ಕಾರ್ಯಕ್ರಮಗಳ ಯೋಜನೆಗಳನ್ನು 2016-17ನೇ ಸಾಲಿನಲ್ಲಿ ಮುಂದುವರೆಸಿ ಸರ್ಕಾರವು ಆದೇಶಿಸಿದೆ.

| ಕ್ರ. ಸಂ | ಕಾರ್ಯಕ್ರಮ ಹಾಗೂ ಲೆಕ್ಕ ಶೀರ್ಷಿಕೆ | ಆಯವ್ಯಯ (ರೂ. ಲಕ್ಷಗಳಲ್ಲಿ) |
|---|---|---|
| 01 | ರೇಷ್ಮೆ ಅಭಿವೃದ್ಧಿ ಯೋಜನೆ<br>2851-00-107-1-35 (106) | 3850.00 |

...2/-

| | | |
|---|---|---|
| 02 | ರೇಷ್ಮೆ ಕೃಷಿ ಅಭಿವೃದ್ಧಿಗೆ ನೂತನ ಕರ್ತೃತ್ವ ಶಕ್ತಿ ಮತ್ತು ಭಾಗೀದಾರರಿಗೆ ಸವಲತ್ತು<br>2851-00-107-1-48 (106) | 8473.00 |
| 03 | ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ<br>2851-00-107-1-49 (106) | 2951.00 |
| 04 | ಕರ್ನಾಟಕ ರೇಷ್ಮೆ ವ್ಯವಸಾಯ ಯೋಜನೆ<br>2851-00-107-1-80 (059)<br>2851-00-107-1-80 (ವೇತನ) | 4824.00<br>318.0 |
| 05 | ಕಟ್ಟಡಗಳು<br>4851-00-107-1-01 (139) | 160.00 |
| 06 | ರೇಷ್ಮೆಗೂಡು ಮಾರುಕಟ್ಟೆಯ ನಿರ್ಮಾಣ (ನಬಾರ್ಡ್)<br>4851-00-107-1-03 (436) | 859.00 |
| | ಒಟ್ಟು | 21435.00 |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಆರ್. ಎಲ್. ಚಿನ್ನಮ್ಮ 10/5
(ಆರ್.ಎಲ್. ಚಿನ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ (ರೇಷ್ಮೆ)

ಇವರಿಗೆ:

1) ಮಹಾಲೇಖಪಾಲರು, (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್‌ಎ)/(ಎ&ಇ), ಕರ್ನಾಟಕ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4) ರೇಷ್ಮೆ ಕೃಷಿ ಅಭಿವೃದ್ಧಿ ಆಯುಕ್ತರು ಹಾಗೂ ರೇಷ್ಮೆ ನಿರ್ದೇಶಕರು, ಬೆಂಗಳೂರು.
5) ನಿರ್ದೇಶಕರು, ಯೋಜನಾ ಇಲಾಖೆ, ಯೋಜನಾ, ಸಂಯೋಜನಾ ಮತ್ತು ಮಾಹಿತಿ ವಿಭಾಗ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6) ನಿರ್ದೇಶಕರು, ಯೋಜನಾ ಇಲಾಖೆ, ಪಿ.ಎಫ್.ಅರ್. ವಿಭಾಗ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7) ಆಂತರಿಕ ಆರ್ಥಿಕ ಸಲಹೆಗಾರರು, ತೋಟಗಾರಿಕೆ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ಬೆಂಗಳೂರು.
8) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
9) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು (ರೇಷ್ಮೆ), ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ವಿಕಾಸಸೌಧ, ಬೆಂಗಳೂರು
11) ಶಾಖಾ ರಕ್ಷಾ ಕಡತ.